**All India Radio: Bangalore**
**Regional Bulletin In Kannada**
**27.08.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.08.2025 / 6.40 p.m.**

**<><><><>**

ಮುಖ್ಯಾಂಶಗಳು

1. ರಾಜ್ಯ ಸೇರಿದಂತೆ ದೇಶದ ೧೩ ಜಿಲ್ಲೆಗಳ ನಾಲ್ಕು ರೈಲ್ವೆ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
2. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆರ್‌ಎಸ್‌ಎಸ್ ಗೀತೆ ಪ್ರಕರಣ ಮುಗಿದ ಅಧ್ಯಾಯ - ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ
3. ಮಂಗಳೂರು ಕುಕ್ಕರ್ ಸ್ಫೋಟ ಪ್ರಕರಣ; ಬೆಂಗಳೂರಿನ ಕೇಂದ್ರ ಕಾರಾಗೃಹದಲ್ಲಿ ಇಡಿ ಅಧಿಕಾರಿಗಳಿಂದ ಆರೋಪಿಗಳ ವಿಚಾರಣೆ
4. ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತ ಹಿನ್ನೆಲೆ; ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಭಾರೀ ಮಳೆಯ ಮುನ್ನೆಚ್ಚರಿಕೆ
5. ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಟೂರ್ನಿ; ಇಂದು ಬೆಂಗಳೂರು ಬ್ಲಾಸ್ಟರ್ಸ್ ಹಾಗೂ ಮಂಗಳೂರು ಡ್ರ್ಯಾಗನ್ಸ್ ಮುಖಾಮುಖಿ

<><><><>

ಪ್ರಯಾಣಿಕರು ಮತ್ತು ಸರಕು ಸಾಗಾಣೆಯನ್ನು ಹೆಚ್ಚಿಸುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ನಾಲ್ಕು ರೈಲ್ವೆ ಯೋಜನೆಗಳಿಗೆ ಇಂದು ಅನುಮೋದನೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ೧೨ ಸಾವಿರದ ೩೨೮ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳಿಗೆ ಹಸಿರು ನಿಶಾನೆ ತೋರಲಾಗಿದೆ. ಗುಜರಾತ್, ಕರ್ನಾಟಕ, ತೆಲಂಗಾಣ, ಬಿಹಾರ ಸೇರಿದಂತೆ ೧೩ ಜಿಲ್ಲೆಗಳನ್ನೊಳಗೊಂಡ ನಾಲ್ಕು ಯೋಜನೆಗಳು ಭಾರತೀಯ ರೈಲ್ವೆಯ ಅಸ್ಥಿತ್ವದಲ್ಲಿರುವ ಜಾಲವನ್ನು ೫೬೫ ಕಿಲೋಮೀಟರ್ ಹೆಚ್ಚಿಸಲಿದೆ. ಅನುಮೋದಿತ ಬಹು ಹಳಿ ಯೋಜನೆಯಲ್ಲಿ ಸುಮಾರು ೩ ಸಾವಿರದ ೧೦೮ ಹಳ್ಳಿಗಳಿಗೆ ಸಂಪರ್ಕ ಸಾಧಿಸಲಿದೆ. ರಾಜ್ಯದ ಮಹತ್ವಾಕಾಂಕ್ಷೆ ಜಿಲ್ಲೆ ಕಲಬುರಗಿ ಸೇರಿದಂತೆ ತೆಲಂಗಾಣ, ಬಿಹಾರ ಮತ್ತು ಅಸ್ಸಾಂ ಈ ಯೋಜನೆಯ ಪ್ರಯೋಜನ ಪಡೆದುಕೊಳ್ಳಲಿದೆ. ಕರ್ನಾಟಕ ಮತ್ತು ತೆಲಂಗಾಣ ನಡುವೆ ಸಂಪರ್ಕ ಕಲ್ಪಿಸುವ ೧೭೩ ಕಿಲೋಮೀಟರ್ ಉದ್ದದ ಸಿಕಂದರಾಬಾದ್ - ವಾಡಿ ೩ ಮತ್ತು ೪ನೇ ಮಾರ್ಗವನ್ನು ೫ ಸಾವಿರದ ೧೨ ಕೋಟಿ ರೂಪಾಯಿ ವೆಚ್ಚದಲ್ಲಿ ೫ ವರ್ಷಗಳಲ್ಲಿ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ.

<><><><>

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆರ್‌ಎಸ್‌ಎಸ್ ಗೀತೆಯನ್ನು ಹಾಡಿರುವುದು ಮುಗಿದ ಅಧ್ಯಾಯ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ

ಅವರು, ಡಿ.ಕೆಶಿವಕುಮಾರ್ ಈಗಾಗಲೇ ಕ್ಷಮೆ ಕೇಳಿದ್ದು ಮತ್ತೊಮ್ಮೆ ಯಾವ ನಾಯಕರು ಅದನ್ನು ಪುನಾರಾವರ್ತಿಸಬಾರದು ಎಂದು ಸೂಚಿಸಿದ್ದಾರೆ. ಪದೇ ಪದೇ ಈ ವಿಷಯವನ್ನು ಕೆದಕದಂತೆ ಮಾಧ್ಯಮಗಳಿಗೆ ತಾಕೀತು ಮಾಡಿದ್ದಾರೆ.

<><><><>

೨೦೨೨ರಲ್ಲಿ ಮಂಗಳೂರಿನಲ್ಲಿ ನಡೆದ ಕುಕ್ಕರ್ ಸ್ಫೋಟಕ್ಕೆ ವಿದೇಶಿ ಹಣದ ಹರಿವು ಕುರಿತಂತೆ ಬೆಂಗಳೂರಿನ ಕೇಂದ್ರ ಕಾರಾಗೃಹದಲ್ಲಿ ಇಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಆರೋಪಿಗಳನ್ನು ವಿಚಾರಣೆ ನಡೆಸಿದ್ದಾರೆ. ಭಾರತದಲ್ಲಿ ವಿಧ್ವಂಸಕ ಚಟುವಟಿಕೆಗಳನ್ನು ನಡೆಸಲು ವಿದೇಶಗಳಿಂದ ಹಣ ಹರಿದು ಬಂದಿರುವ ಬಗ್ಗೆ ಆರೋಪಿ ಮೊಹಮ್ಮದ್ ಶಾರಿಕ್ ಸೇರಿದಂತೆ ಹಲವರನ್ನು ಅಧಿಕಾರಿಗಳು ಪ್ರಶ್ನಿಸಿದ್ದಾರೆ. ಶಂಕಿತ ಭಯೋತ್ಪಾದಕರನ್ನು ವಿಚಾರಣೆ ನಡೆಸುವ ಕುರಿತಂತೆ ಇಡಿ ಅಧಿಕಾರಿಗಳು ನ್ಯಾಯಾಲಯದಿಂದ ಅನುಮತಿ ಪಡೆದಿದ್ದರು.

<><><><>

ಹೆಣ್ಣು ಭ್ರೂಣ ಹತ್ಯೆ ಮತ್ತು ಪತ್ತೆ ಪ್ರಕರಣಗಳನ್ನು ಹಿಮ್ಮೆಟ್ಟಿಸುವಲ್ಲಿ ಮಂಡ್ಯ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಯಶಸ್ವಿಯಾಗಿದೆ. ಈ ವರ್ಷ ಗಂಡು ಹೆಣ್ಣಿನ ಲಿಂಗಾನುಪಾತದಲ್ಲಿ ಮಂಡ್ಯ ಜಿಲ್ಲೆಯಲ್ಲಿ ಭಾರೀ ಏರಿಕೆ ಕಂಡಿದೆ. ಈ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲಾ ಆರೋಗ್ಯ ಇಲಾಖೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಾಗಾರಗಳನ್ನು ಹಮ್ಮಿಕೊಂಡಿತ್ತು. ಕಳೆದ ಆಗಸ್ಟ್ ೨೦೨೪ರಲ್ಲಿ ಆರ್.ಸಿ.ಎಚ್ ವರದಿಯ ಪ್ರಕಾರ ಸಾವಿರ ಗಂಡು ಮಕ್ಕಳಿಗೆ ೮೬೯ ಹೆಣ್ಣು ಮಕ್ಕಳಿದ್ದರು. ಆದರೆ ಈ ವರ್ಷ ಸಾವಿರ ಗಂಡು ಮಕ್ಕಳಿಗೆ ೯೩೦ ಹೆಣ್ಣು ಮಕ್ಕಳಿರುವುದು ತಿಳಿದು ಬಂದಿದೆ. ಭ್ರೂಣ ಹತ್ಯೆ ಕುರಿತು ಮಾತನಾಡಿರುವ ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲೆಯಲ್ಲಿ ಹೆಚ್ಚಾಗಿದ್ದ ಭ್ರೂಣ ಹತ್ಯೆ ತಡೆಯುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಸಾಕಷ್ಟು ಕ್ರಮ ವಹಿಸಿದ್ದು, ಸ್ಕ್ಯಾನಿಂಗ್ ಸೆಂಟರ್ ಗಳ ಮೇಲಿನ ದಾಳಿ, ಸಾರ್ವಜನಿಕರಲ್ಲಿ ಜಾಗೃತಿ ಕಾರ್ಯಕ್ರಮ ಮಾಡಿದ್ದೆವು. ಇವೆಲ್ಲವೂ ಲಿಂಗಾನುಪಾತ ಏರಿಕೆಗೆ ಕಾರಣವಾಗಿವೆ ಎಂದು ತಿಳಿಸಿದ್ದಾರೆ.

<><><><>

ಕೇಂದ್ರ ಕೃಷಿ ಹಾಗೂ ರೈತರ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಇದೇ ೨೯ರಂದು ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ಅಂದು ಅವರು ಮೈಸೂರಿನ ಸುತ್ತೂರು ಮಠದಲ್ಲಿ ಶಿವರಾತ್ರಿ ರಾಜೇಂದ್ರ ಮಹಾಸ್ವಾಮೀಜಿಗಳ ೧೧೦ನೇ ಜಯಂತಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು, ಬೆಂಗಳೂರಿನ ಯಲಹಂಕದಲ್ಲಿರುವ ಕೃಷಿ ಕೀಟ ಸಂಪನ್ಮೂಲಗಳ ಸಂಶೋಧನಾ ಸಂಸ್ಥೆಗೂ ಭೇಟಿ ನೀಡಲಿದ್ದಾರೆ.

<><><><>

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮದಲ್ಲಿ ಹಲವಾರು ಶವಗಳನ್ನು ಹೂತು ಹಾಕಿದ ಪ್ರಕರಣದ ದೂರುದಾರ ಚೆನ್ನಯ್ಯನನ್ನು ವಿಶೇಷ ತನಿಖಾ ತಂಡ ತೀವ್ರ ವಿಚಾರಣೆಗೊಳಪಡಿಸಿದೆ. ಇಂದು ಬೆಳಗ್ಗೆ ಎಸ್ ಐಟಿ ಸಬ್ ಇನ್ ಸ್ಪೆಕ್ಟರ್ ಮಂಜುನಾಥ್ ಮತ್ತು ಸಬ್ ಇನ್ ಸ್ಪೆಕ್ಟರ್ ವಿನೋದ್ ರೆಡ್ಡಿ ನೇತೃತ್ವದಲ್ಲಿ ಬೆಳ್ತಂಗಡಿ ತಾಲೂಕು ಆಸ್ಪತ್ರೆಗೆ ಕರೆತಂದು ವೈದ್ಯಕೀಯ ಪರೀಕ್ಷೆ ನಡೆಸಲಾಗಿದೆ. ಇಂದು ಬೆಳಗ್ಗಿನ ಜಾವದವರೆಗೂ ಮಹೇಶ್ ಶೆಟ್ಟಿ ತಿಮರೋಡಿಯ

ನಿವಾಸದಲ್ಲಿ ಚೆನ್ನಯ್ಯನಿಗೆ ಸಂಬಂಧಿಸಿದ ವಸ್ತುಗಳ ಮಹಜರು ನಡೆಸಿ ವಶಪಡಿಸಿಕೊಳ್ಳಲಾಗಿತ್ತು. ತನಿಖಾ ತಂಡ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸಿ ಮಾಹಿತಿ ಕಲೆ ಹಾಕುತ್ತಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರ ಮನ್ ಕೀ ಬಾತ್ ಕಾರ್ಯಕ್ರಮವು ಇದೇ ಭಾನುವಾರ ಬೆಳಿಗ್ಗೆ ೧೧ ಗಂಟೆಗೆ ಪ್ರಸಾರವಾಗಲಿದೆ.  ಪ್ರಧಾನಿ ಅವರು ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೫ನೇ ಸಂಚಿಕೆಯಾಗಲಿದೆ. ಜನರು ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಕಾರ್ಯಕ್ರಮಕ್ಕಾಗಿ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ನೀಡಬಹುದು. ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈಗೌ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಗೆ ಸಲಹೆಗಳನ್ನು ಈ ತಿಂಗಳ ೨೯ ರವರೆಗೆ ಸ್ವೀಕರಿಸಲಾಗುತ್ತದೆ.

<><><>

ದೇಶದಾದ್ಯಂತ ಇಂದು ಗಣೇಶ ಚತುರ್ಥಿಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ರಾಜಧಾನಿ ಬೆಂಗಳೂರಿನಲ್ಲಿ ಗಣೇಶ  ಹಬ್ಬದ ಸಂಭ್ರಮ ಮನೆ ಮಾಡಿದೆ. ಗಣೇಶ ವಿಸರ್ಜನೆಗೆ ಬಿಬಿಎಂಪಿ ಸಂಪೂರ್ಣ ಸಿದ್ಧತೆ ಮಾಡಿಕೊಂಡಿದೆ. ೪೧ ತಾತ್ಕಾಲಿಕ ಕಲ್ಯಾಣಿಗಳು ಮತ್ತು ೪೮೯ ಸಂಚಾರಿ ಟ್ಯಾಂಕ್‌ಗಳನ್ನು ಮೂರ್ತಿ ವಿಸರ್ಜನೆಗಾಗಿ ಸಜ್ಜುಗೊಳಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಗಣೇಶ ಚತುರ್ಥಿ ಹಬ್ಬದ ಸಂಭ್ರಮ ಮನೆಮಾಡಿದೆ. ಮಂಗಳೂರು ನಗರ ಸೇರಿದಂತೆ ಹಳ್ಳಿ ಹಳ್ಳಿಗಳಲ್ಲೂ  ಗಣೇಶೋತ್ಸವ ಸಮಿತಿಗಳ ನೇತೃತ್ವದಲ್ಲಿ  ಗಣೇಶೋತ್ಸವ ನಡೆಯುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶ್ರದ್ಧಾಭಕ್ತಿಯಿಂದ ಗಣೇಶನ ಹಬ್ಬವನ್ನು ಆಚರಿಸಲಾಗುತ್ತಿದೆ. ಗಣೇಶ ದೇವಾಲಯಗಳಲ್ಲಿ ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ.  ಸಾರ್ವಜನಿಕ ಸ್ಥಳಗಳಲ್ಲಿ ಪೆಂಡಾಲ್ ಹಾಕಿ ವಿವಿಧ ಮಾದರಿಯ ಗಣೇಶ ಮೂರ್ತಿಗಳನ್ನು ಕೂಡಿಸಿ ಪೂಜೆ ಸಲ್ಲಿಸಲಾಗುತ್ತಿದೆ. ಗಣೇಶ ಚತುರ್ಥಿಯಂದು ದೊಡ್ಡಬಳ್ಳಾಪುರದಲ್ಲಿ ನೇಕಾರ ಸಮುದಾಯ ಸಗಣಿಯಲ್ಲಿ ಪಿಳ್ಳೆರಾಯನ್ನು ಪ್ರತಿಷ್ಠಾಪಿಸಿ, ಮಗ್ಗಗಳಿಗೆ ಪೂಜೆ ಸಲ್ಲಿಸುವ ಆಚರಣೆ ವಿಶೇಷವಾಗಿದೆ.ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಗಣೇಶ ಚತುರ್ಥಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತಿದೆ. ಶೃಂಗೇರಿ ಶಾರದಾ ಪೀಠದ ಶ್ರೀ ವಿನಾಯಕ ದೇವಾಲಯ, ಮಠದ ಗುರು ನಿವಾಸಗಳಲ್ಲಿ ವಿಶೇಷ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಯಚೂರಿನ  ವಿವಿಧ  ಮಂಡಳಿ ವತಿಯಿಂದ ಗಣೇಶ ವಿಗ್ರಹಗಳ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವ ಎನ್ ಎಸ್ ಬೋಸರಾಜು ಭಾಗವಹಿಸಿದ್ದರು. ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆ ಜರುಗುದಂತೆ ಜಿಲ್ಲಾ ಆಡಳಿತ ಅಗತ್ಯ ಕ್ರಮ ಕೈಗೊಂಡಿದೆ.

<><><>

ರಾಜ್ಯದ ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಕ್ರಿಯವಾಗಿದ್ದು, ಕರಾವಳಿ ಕರ್ನಾಟಕ ಸೇರಿದಂತೆ ಹಲವೆಡೆ ಮಳೆಯಾಗಿದೆ. ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದಾಗಿ ಇಂದಿನಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಧಾರಾಕಾರ ಮಳೆ ಸುರಿಯುತ್ತಿದ್ದು, ಮುಂದಿನ ಎರಡು ದಿನಗಳ ಕಾಲ

ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿಯ ಜಿಲ್ಲೆಯಲ್ಲಿ ಗುಡುಗು ಸಹಿತ ಮಳೆ ಹಾಗೂ ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಇನ್ನುಳಿದ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ನಿರೀಕ್ಷೆ ಇದೆ. ಬೆಂಗಳೂರಿನಲ್ಲೂ ಮೋಡ ಕವಿದ ವಾತಾವರಣವಿದ್ದು ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಟೂರ್ನಿಯ ಎರಡನೇ ಕ್ವಾಲಿಫೈರ್ ಪಂದ್ಯದಲ್ಲಿಂದು ಫೈನಲ್‌ಗೆ ಪ್ರವೇಶ ಪಡೆಯಲು ಬೆಂಗಳೂರು ಬಸ್ಟರ್ಸ್ ತಂಡ, ಮಂಗಳೂರು ಡ್ರ್ಯಾಗನ್ಸ್ ತಂಡದ ವಿರುದ್ಧ ಸೆಣಸಾಟ ನಡೆಸಲಿದೆ. ಪಂದ್ಯ ಇಂದು ರಾತ್ರಿ ೭.೧೫ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>